# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 505
ಸದಸ್ಯರ ಹೆಸರು : ಶ್ರೀ ಎಂ.ನಾಗರಾಜು,
ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು
ಉತ್ತರಿಸುವ ದಿನಾಂಕ : 22.12.2022

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ರಾಜ್ಯದ ನಾಲ್ಕು ಸಾರಿಗೆ ನಿಗಮಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗಳು ನಷ್ಟದಲ್ಲಿ ಕಾರ್ಯಾಚರಣೆಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಕರ್ನಾಟಕದ ಜೀವನಾಡಿಯಾದ ಈ ಸಂಸ್ಥೆಗಳನ್ನು ಮರುಚೇತನಗೊಳಿಸಲು ಮತ್ತು ಸಾರ್ವಜನಿಕ ಪ್ರಯಾಣಿಕರಿಗೆ ಉತ್ತಮ, ದಕ್ಷ ಸಾರಿಗೆ ಸೌಲಭ್ಯವನ್ನು ಒದಗಿಸಲು ಸರ್ಕಾರದಿಂದ ಕಾರ್ಯಸಾಧ್ಯತೆಯ ಅಂತರ ನಿಧಿಯನ್ನು (Vaibility Gap Funding) ಇದುವರೆಗೂ ಸಾರಿಗೆ ಸಂಸ್ಥೆಗಳ ಸ್ವಾವಲಂಬನೆಗೆ ಏಕೆ ಒದಗಿಸಿರುವುದಿಲ್ಲ; (ವಿವರಗಳನ್ನು ಒದಗಿಸುವುದು) ಇಲ್ಲವಾದಲ್ಲಿ, ಸಾರಿಗೆ ಸಂಸ್ಥೆಗಳ ಬಗ್ಗೆ ಸರ್ಕಾರವು ಹೊಂದಿರುವ ನಿಲುವೇನು; | ನಷ್ಟದಲ್ಲಿರುವ ಸಾರಿಗೆ ಸಂಸ್ಥೆಗಳನ್ನು ಉತ್ತೇಜಿಸಲು ಸರ್ಕಾರವು ಈ ಕೆಳಕಂಡಂತೆ ವಿಶೇಷ ಆರ್ಥಿಕ ಸಹಾಯವನ್ನು ಒದಗಿಸಿದೆ: |

(ರೂ. ಕೋಟಿಗಳಲ್ಲಿ)

| ಕ್ರ.ಸಂ. | ವಿಶೇಷ ಸಹಾಯ ಧನದ ವಿವರ | 2020-21 | 2021-22 | 2022-23 (ಆಗಸ್ಟ್ 22ರ ಅಂತ್ಯದ ವರೆಗೆ) |
|---|---|---|---|---|
| 1. ನೌಕರರ ವೇತನ ಪಾವತಿಗಾಗಿ | | | | |
| | ಕ.ರಾ.ರ.ಸಾ.ನಿಗಮ | 563.55 | 235.86 | - |
| | ಬೆಂ.ಮ.ಸಾ.ಸಂಸ್ಥೆ | 690.55 | 582.05 | 35.00 |
| | ವಾ.ಕ.ರ.ಸಾ.ಸಂಸ್ಥೆ | 369.41 | 230.17 | - |
| | ಕ.ಕ.ರ.ಸಾ.ನಿಗಮ | 329.89 | 134.14 | - |
| 2. ಇಂಧನ ವೆಚ್ಚ ಹಾಗೂ ಭವಿಷ್ಯನಿಧಿ ಹಿಂಬಾಕಿ ಪಾವತಿಗಾಗಿ | | | | |
| | ಕ.ರಾ.ರ.ಸಾ.ನಿಗಮ | - | 200.00 | 330.00 |
| | ಬೆಂ.ಮ.ಸಾ.ಸಂಸ್ಥೆ | 308.00 | 400.00 | 420.00 |
| | ವಾ.ಕ.ರ.ಸಾ.ಸಂಸ್ಥೆ | - | - | 320.00 |
| | ಕ.ಕ.ರ.ಸಾ.ನಿಗಮ | - | - | 130.00 |

**3. ಮೋಟಾರು ವಾಹನ ತೆರಿಗೆ ಮನ್ನಾ**

ನಾಲ್ಕೂ ಸಾರಿಗೆ ಸಂಸ್ಥೆಗಳು ಸರ್ಕಾರಕ್ಕೆ 2020-21 ನೇ ಸಾಲಿನವರೆಗೆ ಹಾಗೂ 2021-22ನೇ ಸಾಲಿನಲ



Generated from eOffice by B SREERAMULU, TD-MIN(BS), TRANSPORT MINISTER, Trans on 17/12/2022 04:34 PM

| | | |
|---|---|---|
| | | ಲಿ ಪಾವತಿಸಬೇಕಾಗಿದ್ದ ಮೋಟಾರು ವಾಹನ ತೆರಿಗೆ ಮೊತ್ತಕ್ಕೆ ವಿನಾಯಿತಿ ನೀಡಲಾಗಿದೆ.<br><br>ಇದಲ್ಲದೆ, 2000-02ರಿಂದ ಬೆಂ.ಮ.ಸಾ.ಸಂಸ್ಥೆ, ವಾ.ಕ.ರ.ಸಾ.ಸಂಸ್ಥೆ ಹಾಗೂ ಕ.ಕ.ರ.ಸಾನಿಗಮಗಳು ಸರ್ಕಾರಕ್ಕೆ ಪಾವತಿಸಬೇಕಾಗಿದ್ದು, ಆದರೆ ಬಾಕಿ ಉಳಿಸಿಕೊಳ್ಳಲಾದ ಮೋಟಾರು ವಾಹನ ತೆರಿಗೆ ಮೊತ್ತ ಕ್ರಮವಾಗಿ ರೂ.269.48 ಕೋಟಿ, ರೂ.327.06 ಕೋಟಿ ಮತ್ತು ರೂ.392.33 ಕೋಟಿಗಳನ್ನು ಸರ್ಕಾರದ ಷೇರು ಬಂಡವಾಳವಾಗಿ ಪರಿವರ್ತಿಸಲಾಗಿದೆ.<br><br>ರಾಜ್ಯದ ನಾಲ್ಕೂ ಸಾರಿಗೆ ಸಂಸ್ಥೆಗಳ ಸ್ವಾವಲಂಬನೆ ಮತ್ತು ಸಂಪನ್ಮೂಲ ಕ್ರೋಢೀಕರಣಗಳ ಸಂಪೂರ್ಣ ಅಧ್ಯಯನ ನಡೆಸಿ ವರದಿಯನ್ನು ಸಲ್ಲಿಸಲು ಶ್ರೀ ಎಂ.ಆರ್ ಶ್ರೀನಿವಾಸಮೂರ್ತಿ (ನಿವೃತ್ತ) ಭಾ.ಆ.ಸೇ., ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ಏಕ ಸದಸ್ಯ ಸಮಿತಿಯು ಸಲ್ಲಿಸಿರುವ ವರದಿಯು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ.<br><br>ಮುಂದುವರೆದು, ಕ.ರಾ.ರ.ಸಾ.ನಿಗಮವು ಸಾರಿಗೆಗಳ ಕಾರ್ಯಾಚರಣೆ ವೆಚ್ಚವನ್ನು ಕಡಿಮೆ ಮಾಡಲು ಏಕ ಚಾಲನಾ ಸಿಬ್ಬಂದಿ ಅನುಸೂಚಿಗಳನ್ನು ಹೆಚ್ಚಿಸಲಾಗುತ್ತಿದೆ.<br><br>ನಾಲ್ಕೂ ಸಾರಿಗೆ ಸಂಸ್ಥೆಗಳು ನಷ್ಟವನ್ನು ಸರಿದೂಗಿಸುವ ಕ್ರಮಗಳನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಆ | ರಾಜ್ಯದ ನಾಲ್ಕೂ ಸಾರಿಗೆ ನಿಗಮಗಳ ಸ್ವಾವಲಂಬನೆ ಹಾಗೂ ಸಾರ್ವಜನಿಕ ಪ್ರಯಾಣಿಕರಿಗೆ ಸಮರ್ಪಕವಾದ ಸಾರಿಗೆ ಸೌಲಭ್ಯ ಒದಗಿಸಲು ಸರ್ಕಾರವು ಬಜೆಟ್‌ನಲ್ಲಿ ಪ್ರತಿಶತ 2% ಹಣವನ್ನು ಮೀಸಲಿಟ್ಟರೆ ಅನುಕೂಲವಾಗಲಿದ್ದು, ಈ ನಿಟ್ಟಿನಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ಸಂಪೂರ್ಣ ಮಾಹಿತಿಯನ್ನು ನೀಡುವುದು) | ನಾಲ್ಕೂ ಸಾರಿಗೆ ಸಂಸ್ಥೆಗಳಿಗೆ ಪ್ರತಿ ವರ್ಷ ಆಯವ್ಯಯದಲ್ಲಿ ಸಾರಿಗೆ ಸಂಸ್ಥೆಗಳ ವ್ಯಾಪ್ತಿಯಲ್ಲಿ ಬಸ್ ಘಟಕಗಳು, ಬಸ್ ನಿಲ್ದಾಣಗಳು, ಇತರೆ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಹಾಗೂ ಬಸ್‌ಗಳ ಖರೀದಿಯ ಸಾಲದ ಮರುಪಾವತಿಗಾಗಿ, ಭವಿಷ್ಯ ನಿಧಿ, ಇಂಧನ ವೆಚ್ಚ ಮತ್ತಿತರೆ ಶಾಸನಬದ್ಧ ಪಾವತಿಗಾಗಿ ಆರ್ಥಿಕ ಪರಿಹಾರ/ ಧನ ಸಹಾಯ, ವಿವಿಧ ರೀತಿಯ ಪಾಸ್‌ಗಳ ವೆಚ್ಚದ ಸರ್ಕಾರದ ಪಾಲಿನ ಮೊತ್ತದ ಸಹಾಯಧನ, ಅಲ್ಲದೇ, ಕೋವಿಡ್-19ರ ಸಂದರ್ಭದಲ್ಲಿ ಸಾರಿಗೆ ಸಂಸ್ಥೆಗಳ ನೌಕರರ ವೇತನ ಪಾವತಿಗೂ ಸಹ ವಿಶೇಷ ಅನುದಾನ ಸೇರಿದಂತೆ, ವಿವಿಧ |



Generated from eOffice by B SREERAMULU, TD-MIN(BS), TRANSPORT MINISTER, Trans on 17/12/2022 04:34 PM

| | | |
|---|---|---|
| | | ಯೋಜನೆಗಳಿಗೆ ಅನುದಾನವನ್ನು ನಿಗದಿಪಡಿಸಿ, ಬಿಡುಗಡೆಗೊಳಿಸಲಾಗುತ್ತಿದೆ. |

ಸಂಖ್ಯೆ: ಟಿಡಿ 301 ಟಿಸಿಕ್ಯೂ 2022

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು



Generated from eOffice by B SREERAMULU, TD-MIN(BS), TRANSPORT MINISTER, Trans on 17/12/2022 04:34 PM

**ಅನುಬಂಧ-1**

## ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ

- ನಿಗಮ ಸಾರಿಗೆಗಳ ಕಾರ್ಯಾಚರಣೆ ವೆಚ್ಚವನ್ನು ಕಡಿಮೆ ಮಾಡಲು ಏಕ ಚಾಲನಾ ಸಿಬ್ಬಂದಿ ಅನುಸೂಚಿಗಳನ್ನು ಹೆಚ್ಚಿಸಲಾಗುತ್ತಿದೆ.

- ಸಾರಿಗೆ ನಿಗಮಗಳ ಆದಾಯ ವೃದ್ಧಿಯ ಭಾಗವಾಗಿ, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಲ್ಲಿ ಪಾರ್ಸಲ್ ಸೇವೆಗಳನ್ನು ದಿನಾಂಕ.01.03.2021 ರಿಂದ ಪ್ರಾರಂಭಿಸಲಾಗಿದ್ದು, ಮೊದಲ ಹಂತದಲ್ಲಿ ಕ.ರಾ.ರ.ಸಾ ನಿಗಮ, ವಾಕರಸಾ ಸಂಸ್ಥೆ ಹಾಗೂ ಕಕರಸಾ ನಿಗಮದ 88 ಬಸ್ ನಿಲ್ದಾಣಗಳಲ್ಲಿ ಹಾಗೂ ಅಂತರ ರಾಜ್ಯದ 21 ಬಸ್ ನಿಲ್ದಾಣಗಳಲ್ಲಿ ಒಟ್ಟು 109 ಕೌಂಟರ್‌ಗಳನ್ನು ಪ್ರಾರಂಭಿಸಲಾಗಿದೆ. 2ನೇ ಹಂತದಲ್ಲಿ 92 ಕೌಂಟರ್ ಪ್ರಾರಂಭಿಸಲಾಗಿದ್ದು, ಮೂರನೇ ಹಂತದಲ್ಲಿ 100 ಪಾರ್ಸಲ್ ಕೌಂಟರ್ ಪ್ರಾರಂಭಿಸಲು ಸಮೀಕ್ಷೆ ಕಾರ್ಯ ಪ್ರಗತಿಯಲ್ಲಿದೆ.

## ಬೆಂಗಳೂರು ಮಹಾನಗ ಸಾರಿಗೆ ಸಂಸ್ಥೆ

**ಸಂಸ್ಥೆಯನ್ನು ಅಭಿವೃದ್ಧಿಪಡಿಸಲು ಹಾಗೂ ನಷ್ಟವನ್ನು ನೀಗಿಸಲು ಕೈಗೊಂಡ ಕ್ರಮಗಳು ಈ ಕೆಳಕಂಡಂತಿದೆ:**

- ಸಾರ್ವಜನಿಕರನ್ನು ಸಮೂಹ ಸಾರಿಗೆಯತ್ತ ಸೆಳೆಯಲು ಸಂಸ್ಥೆಯು ಸಾಂದರ್ಭಿಕ ಒಪ್ಪಂದ, ಖಾಯಂ ಗುತ್ತಿಗೆ ಹಾಗೂ ಡೆಡಿಕೇಟೆಡ್ ಸೇವೆಗಳನ್ನು ಒದಗಿಸುತ್ತಿದೆ.
- ಮೆಟ್ರೋ ಪ್ರಯಾಣಿಕರಿಗೆ First and Last mile ಸಂಪರ್ಕವನ್ನು ಒದಗಿಸಲು ಮೆಟ್ರೋ ನಿಲ್ದಾಣಗಳಿಂದ ವಿವಿಧ ಬಡಾವಣೆಗಳಿಗೆ/ಸ್ಥಳಗಳಿಗೆ ಮೆಟ್ರೋ ಫೀಡರ್ ಸೇವೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.
- 2022-23ನೇ ಸಾಲಿನಲ್ಲಿ 238 ಬಿ.ಎಸ್-6 ಡೀಸೆಲ್ ಇಂಧನದ ಸಾಮಾನ್ಯ ಬಸ್ಸುಗಳನ್ನು ಸಂಸ್ಥೆಯ ವಾಹನ ಬಲಕ್ಕೆ ಸೇರ್ಪಡೆಗೊಳಿಸಲಾಗಿರುತ್ತದೆ.
- ಭಾರತ ಸರ್ಕಾರದ ಫೇಮ್-2 ಅಡಿಯಲ್ಲಿ 300 ಹವಾನಿಯಂತ್ರಿತ ಬಸ್ಸುಗಳು, ರಾಜ್ಯ ಸರ್ಕಾರದ ಸ್ಮಾರ್ಟ್ ಸಿಟಿ ಯೋಜನೆಯಡಿಯಲ್ಲಿ 90 ಮೆಟ್ರೋ ಫೀಡರ್ ಬಸ್ಸುಗಳು, ಒಟ್ಟಾರೆ 390 ಎಲೆಕ್ಟ್ರಿಕ್ ಬಸ್ಸುಗಳನ್ನು GCC Model ಆಧಾರದ ಮೇಲೆ ಕಾರ್ಯಾಚರಣೆ ಮಾಡಲು ಯೋಜಿಸಲಾಗಿದೆ.
- ಭಾರತ ಸರ್ಕಾರದ ಫೇಮ್-2 ಅಡಿಯಲ್ಲಿ M/s.CESL ವತಿಯಿಂದ 921 ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್ಸುಗಳನ್ನು GCC Model ಆಧಾರದ ಮೇಲೆ ಕಾರ್ಯಾಚರಣೆ ಮಾಡಲು ಯೋಜಿಸಲಾಗಿದೆ.

## ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ.

- ಸಂಸ್ಥೆಯ ವ್ಯಾಪ್ತಿಯಿಂದ ಪಣಜಿ, ಪುಣೆ, ಮುಂಬೈ, ಹೈದ್ರಾಬಾದ, ಕಲಬುರ್ಗಿ, ಬೀದರ, ಬಳ್ಳಾರಿ, ಮೈಸೂರು, ಮಂಗಳೂರು, ಬೆಂಗಳೂರು ಮಾರ್ಗಗಳಲ್ಲಿ ಹಾಗೂ ಹೊಸ ಮಾರ್ಗಗಳಲ್ಲಿ ಪ್ರತಿಷ್ಠಿತ ಸಾರಿಗೆಗಳನ್ನು ಅಳವಡಿಸಿ ಆದಾಯ ಹೆಚ್ಚಿಸಲು ಮೊಬೈಲ್ ಆಪ್ ಮೂಲಕ ಹಾಗೂ ಎಂ-ಬುಕಿಂಗ್, ಇ–ಬುಕಿಂಗ್, ಫ್ರಾಂಚೈಸಿ ಬುಕಿಂಗ್ ಹೆಚ್ಚಿ , ಹೆಚ್ಚಿನ ಪ್ರಚಾರ ಕೈಗೊಂಡು ಪ್ರೋತ್ಸಾಹಕ ದರ ಮತ್ತು ರಿಯಾಯಿತಿಗಳ ಮಾಹಿತಿಯನ್ನು ಪ್ರಯಾಣಿಕರಿಗೆ ನೀಡಿ ಪ್ರಯಾಣಿಕರನ್ನು ಆಕರ್ಷಿಸಲು ಎಲ್ಲ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
- ತಾಲ್ಲೂಕದಿಂದ ತಾಲ್ಲೂಕ ಕೇಂದ್ರಗಳಿಗೆ, ತಾಲ್ಲೂಕ ಕೇಂದ್ರದಿಂದ ಜಿಲ್ಲಾ ಕೇಂದ್ರಗಳಿಗೆ ಹಾಗೂ ಜಿಲ್ಲಾ ಕೇಂದ್ರದಿಂದ ಜಿಲ್ಲಾ ಕೇಂದ್ರಗಳಿಗೆ ಪಾಯಿಂಟ-ಟು-ಪಾಯಿಂಟ ಮಾದರಿಯಲ್ಲಿ ಸುಮಾರು 220 ಅನುಸೂಚಿಗಳನ್ನು ಕಾರ್ಯಾಚರಿಸಲು ಯೋಜಿಸಲಾಗಿದೆ.
- ಸಂಸ್ಥೆಯಲ್ಲಿ ಚಾಲನಾ ಸಿಬ್ಬಂದಿಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಉತ್ತಮ ಆದಾಯ ತರುವ ನಿಟ್ಟಿನಲ್ಲಿ ಪ್ರಸ್ತುತ 200 ಅನುಸೂಚಿಗಳನ್ನು ನಿರ್ವಾಹಕರಹಿತ ಸಾರಿಗೆಗಳಾಗಿ ಕಾರ್ಯಾಚರಣೆ ಮಾಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಅನುಸೂಚಿಗಳನ್ನು ನಿರ್ವಾಹಕರಹಿತ ಸಾರಿಗೆಗಳಾಗಿ ಕಾರ್ಯಾಚರಣೆ ಮಾಡುವ ಯೋಜನೆ ಇರುತ್ತದೆ.
- ಸಂಸ್ಥೆಯ ಪ್ರಮುಖ ಸ್ಥಳಗಳಿಂದ ಬದಾಮಿ, ಐಹೊಳೆ, ಪಟ್ಟದಕಲ್ಲು, ಕೂಡಲಸಂಗಮ, ಜೋಗ್ ಫಾಲ್ಸ್, ಗೋಕಾಕ್ ಫಾಲ್ಸ್, ಕಪ್ಪತಗುಡ್ಡ ಮುಂತಾದ ಪ್ರವಾಸಿ ತಾಣಗಳಿಗೆ ಪ್ಯಾಕೇಜ್ ಟೂರ್ ವ್ಯವಸ್ಥೆಯನ್ನು ಪ್ರಾರಂಭಿಸಲಾಗಿದೆ.
- ಬಸ್ಸುಗಳ ಮೇಲೆ ಜಾಹೀರಾತು, ಬಸ್ ನಿಲ್ದಾಣಗಳಲ್ಲಿ ಹೋರ್ಡಿಂಗ್ಸ ಅಳವಡಿಕೆ, ಡಿಜಿಟಲ್ ಗ್ಲೋಸೈನ್ ಬೋರ್ಡ್, ವಿಡಿಯೋವಾಲ್ ಅಡ್ವರ್ಟೈಜ್‌ಮೆಂಟ್‌ಗಳ ಮೂಲಕ ಆದಾಯ ಹೆಚ್ಚಳಕ್ಕೆ ಕ್ರಮ ವಹಿಸಲಾಗಿದೆ.

## ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ

**ನಿಗಮವನ್ನು ಲಾಭದಾಯಕವನ್ನಾಗಿ ಮಾಡುವಲ್ಲಿ ಸಂಚಾರ ಇಲಾಖೆಯಿಂದ ರೂಪಿಸಿರುವ ಯೋಜನೆಗಳು ಈ ಕೆಳಗಿನಂತಿವೆ.**

- ಘಟಕ/ವಿಭಾಗಗಳ ಮಟ್ಟದಲ್ಲಿ ದಿನಂಪ್ರತಿ ಅನುಸೂಚಿವಾರು ಆದಾಯಗಳನ್ನು ಪರಿಶೀಲಿಸಿ, ಕಡಿಮೆ ಆದಾಯ ಬರುವ / ಹೆಚ್ಚಿಗೆ ನಷ್ಟ ಉಂಟು ಮಾಡುವ ಅನುಸೂಚಿಗಳನ್ನು ಪರಿಷ್ಕರಿಸಿ ಕಾರ್ಯಾಚರಣೆ ಮಾಡಲಾಗುತ್ತಿದೆ.
- ಡಬಲ್ ಕ್ರ್ಯೂ ಅನುಸೂಚಿಗಳನ್ನು ಸೂಕ್ತ ರೀತಿಯಲ್ಲಿ ಪರಿಷ್ಕರಣೆ ಮಾಡಲಾಗುತ್ತಿದೆ.
- ಉತ್ತಮ ಆದಾಯ ಬರುವ ಮಾರ್ಗಗಳಲ್ಲಿ ಹೊಸ ವಾಹನಗಳನ್ನು ಕಾರ್ಯಾಚರಣೆ ಮಾಡಲು ಯೋಜಿಸಲಾಗಿದೆ.
- ಖಾಲಿ ಇರುವ ಮಳಿಗೆಗಳಿಗೆ ಟೆಂಡರ್ ಪ್ರಕ್ರೀಯೆ ಸರಳೀಕರಣಗೊಳಿಸಿ ಆದಾಯ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ಜಾಹೀರಾತು ಆದಾಯ ಹೆಚ್ಚಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.
- ನಿಗಮದ ತೆರೆದ ನಿವೇಶನಗಳಲ್ಲಿ ಬಾಡಿಗೆ ಆಧಾರದ ಮೇಲೆ ಇಂಧನ ಬಂಕ ಅಳವಡಿಸಿ ವಾಣಿಜ್ಯ ಆದಾಯ ಸಂಗ್ರಹಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.